ಎನ್ನುವ ಭಾವನೆಯನ್ನು ನಾನು ವ್ಯಕ್ತಪಡಿಸುತ್ತೇನೆ. ನಾನು ಸರ್ಕಾರವನ್ನು ಒತ್ತಾಯ ಮಾಡುತ್ತೇನೆ ನನ್ನ ಕ್ಷೇತ್ರದಲ್ಲಿ ಹೆಚ್ಚು ಹೆಚ್ಚು ಬರಗಾಲ ಕಾಮಗಾರಿಗಳನ್ನು ತೆಗೆದುಕೊಳ್ಳಬೇಕೆಂದು ಒತ್ತಾಯಿಸಿ ನಾನು ನನ್ನ ಮಾತನ್ನು ಮುಗಿಸುತ್ತೇನೆ.

ಉಪಾಧ್ಯಕ್ಷರು:-ಈಗ ಬರಗಾಲದ ಬಗ್ಗೆ ಚರ್ಚೆ ಮುಕ್ತಾಯವಾಯಿತು, ಇದರ ಬಗ್ಗೆ 7 ನೇ ತಾರೀಖಿಗೆ ಮಾನ್ಯ ಮಂತ್ರಿಗಳು ಉತ್ತರ ಕೊಡುವುದು. ಈಗ ವಿತ್ತೀಯ ಕಾರ್ಯಕಲಾಪಗಳನ್ನು ತೆಗೆದುಕೊಳ್ಳೋಣ.

ವಿತ್ತೀಯ ಕಾರ್ಯಕಲಾಪಗಳು

1995-96 ನೇ ಸಾಲಿನ ಇಲಾಖಾ ಬೇಡಿಕೆಗಳ ಮಂಡಣೆ.

1)ಶ್ರೀ ಡಿ.ಮಂಜುನಾಥ್ (ಮಾನ್ಯ ಉನ್ನತ ಶಿಕ್ಷಣ ಸಚಿವರು):-

ಅಭಿಯಾಚನೆ ಕ್ರಮಾಂಕ 11- ಉನ್ನತ ಶಿಕ್ಷಣ

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಉನ್ನತ ಶಿಕ್ಷಣಕ್ಕೆ'' ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 272,57,15,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 30,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಭಿನ್ನವಿಸಿಕೊಳ್ಳುತ್ತೇನೆ.

2)ಶ್ರೀ ಎಂ.ಸಿ.ನಾಣಯ್ಯ (ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಪರವಾಗಿ ಶ್ರೀ ಸಿ.ಬೈರೇಗೌಡ (ಮಾನ್ಯ ಕೃಷಿ ಸಚಿವರು):-

ಅಭಿಯಾಚನೆ ಕ್ರಮಾಂಕ -೨೬- ವಾರ್ತಾ ಮತ್ತು ಪ್ರಚಾರ

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೧೯೯೬ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ವಾರ್ತಾ ಮತ್ತು ಪ್ರಚಾರ''ಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 11,50,56,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ -೩೫- ರಾಜ್ಯ ವಿಧಾನಮಂಡಲ

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ರಾಜ್ಯ ವಿಧಾನಮಂಡಲಕ್ಕೆ'' ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 16,10,62,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ-ಖಿಒ-ನ್ಯಾಯ ಪರಿಪಾಲನೆ

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ನ್ಯಾಯ ಪರಿಪಾಲನೆಗೆ'' ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 64,20,44,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

3)ಶ್ರೀ ಹೆಚ್.ಜಿ.ಗೋವಿಂದೇಗೌಡ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಪರವಾಗಿ ಶ್ರೀ ಡಿ.ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು):-

ಅಭಿಯಾಚನೆ ಕ್ರಮಾಂಕ ೧೪- ಪ್ರಾಥಮಿಕ ಮತ್ತು ಸೆಕೆಂಡರಿ ಶಿಕ್ಷಣ

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಪ್ರಾಥಮಿಕ ಮತ್ತು ಸೆಕೆಂಡರಿ ಶಿಕ್ಷಣಕ್ಕೆ'' ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 14,36,35,75,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ ೧೦- ಲೇಖನ ಸಾಮಗ್ರಿ ಮತ್ತು ಮುದ್ರಣ

ಶ್ರೀಯುತರೆ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಲೇಖನ ಸಾಮಗ್ರಿ ಮತ್ತು ಮುದ್ರಣಕ್ಕೆ'' ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 23,66,69,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು)ನಾನು ಬಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ ೬೦- ಮಲಾನಾಡು ಪ್ರದೇಶ ಅಭಿವೃದ್ಧಿ

ಶ್ರೀಯುತರೇ

ರಾಜ್ಯಪಾಲರ ಶಿಫಾರಸ್ಸಿನ ಮೆರೆಗೆ 31-3-1996 ರಂದು ಕೊನೊಗೊಳ್ಳುವ ಆರ್ಥಿಕ ವರ್ಷದಲ್ಲಿ 'ಮಲೆನಾಡು ಪ್ರದೇಶ ಅಭಿವೃದ್ಧಿಗೆ'' ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 30,00,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

4)ಶ್ರೀಮತಿ ಬಿ.ಟಿ.ಲಲಿತಾನಾಯಕ್ (ಮಾನ್ಯ ಮಹಿಳೆ ಮತ್ತು ಮಕ್ಕಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು):-

ಅಭಿಯಾಚನೆ ಕ್ರಮಾಂಕ ೧೩-ಕಲೆ, ಸಂಸ್ಕೃತಿ ಮತ್ತು ಕನ್ನಾಡಾಭಿವೃದ್ಧಿ

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಕಲೆ, ಸಂಸ್ಕೃತಿ ಮತ್ತು ಕನ್ನಡಾಭಿವೃದ್ಧಿಗೆ'' ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 15,36,06,000 ರೂ ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ 58-ಮಹಿಳಾ ಮತ್ತು ಮಕ್ಕಳ ಕಲ್ಯಾಣ

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಮಹಿಳಾ ಮತ್ತು ಮಕ್ಕಳ ಕಲ್ಯಾಣ''ಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 259,24,52,000 ರೂ.ಗಳ್ಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 100,00,000 ರೂ.ಗಳಿಗಿಂತ ಮೀರಿದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಭಿನ್ನವಿಸಿಕೊಳ್ಳುತ್ತೇನೆ.

5) ಉಪ ಮುಖ್ಯ ಮಂತ್ರಿಗಳು:-

ಅಭಿಯಾಚನೆ ಕ್ರಮಾಂಕ - 27- ಪ್ರವಾಸೋದ್ಯಮ

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಪ್ರವಾಸೋದ್ಯಮಕ್ಕೆ'' ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 10,04,69,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

(6) ಅಭಿಯಾಚನೆ ಕ್ರಮಾಂಕ 47-ವಿದ್ಯುಚ್ಛಕ್ತಿ ಯೋಜನೆಗಳು

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ವಿದ್ಯುಚ್ಛಕ್ತಿ ಯೋಜನೆಗಳಿಗೆ'' ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 100,05,98,000 ರೂ. ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 203,79,00,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

7) ಕೃಷಿ ಸಚಿವರು:-

ಅಭಿಯಾಚನೆ ಕ್ರಮಾಂಕ 1-ವ್ಯವಸಾಯ

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ವ್ಯವಸಾಯಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 223,12,72,000 ರೂ. ಗಳಿಗಿಂತ ಮೀರಿದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 374,59,000 ರೂ. ಗಳಿಗಿಂತ ಮೀರಿದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ (ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

8)ಸಮಾಜ ಕಲ್ಯಾಣ ಸಚಿವರು:-

ಅಭಿಯಾಚನೆ ಕ್ರಮಾಂಕ 57-ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗದವರ ಕಲ್ಯಾಣ

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗದವರ ಕಲ್ಯಾಣ'' ಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 261,97,83,000 ರೂ. ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 25,31,00,000 ರೂ ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

9)ಕಾರ್ಮಿಕ ಸಚಿವರು:-

ಅಭಿಯಾಚನೆ ಕ್ರಮಾಂಕ 56-ಕಾರ್ಮಿಕ ಮತ್ತು ಉದ್ಯೋಗ

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಕಾರ್ಮಿಕ ಮತ್ತು ಉದ್ಯೋಗ'' ಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 64,88,83,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

10)ಪಶುಸಂಗೋಪನೆ ರಾಜ್ಯ ಸಚಿವರು:-

ಅಭಿಯಾಚನೆ ಕ್ರಮಾಂಕ 3-ಪಶುಸಂಗೋಪನೆ

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಪಶುಸಂಗೋಪನೆಗೆ'' ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 95,59,43,000 ರೂ. ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 40,00,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

11) ತೋಟಗಾರಿಕೆ ರಾಜ್ಯ ಸಚಿವರು:-

ಅಭಿಯಾಚನೆ ಕ್ರಮಾಂಕ 2-ತೋಟಗಾರಿಕೆ

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ತೋಟಗಾರಿಕೆ''ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 61,91,69,000 ರೂ. ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 75,00,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

12) ಮಹಿಳೆ ಮತ್ತು ಮಕ್ಕಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು:-

ಅಭಿಯಾಚನೆ ಕ್ರಮಾಂಕ 13-ಕಲೆ, ಸಂಸ್ಕೃತಿ ಮತ್ತು ಕನ್ನಡಾಭಿವೃದ್ಧಿ

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಕಲೆ, ಸಂಸ್ಕೃತಿ ಮತ್ತು ಕನ್ನಡಾಭಿವೃದ್ಧಿಗೆ'' ಸಂದಾಯ ಮಾಡವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 15,36,06,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

13) ಅಭಿಯಾಚನೆ ಕ್ರಮಾಂಕ 58-ಮಹಿಳಾ ಮತ್ತು ಮಕ್ಕಳ ಕಲ್ಯಾಣ

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಮಹಿಳಾ ಮತ್ತು ಮಕ್ಕಳ ಕಲ್ಯಾಣ''ಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 259,24,52,000 ರೂ ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 100,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

14) ಯುವಜನ ಸೇವೆ ಮತ್ತು ಕ್ರೀಡಾ ರಾಜ್ಯ ಸಚಿವರು:-

ಅಭಿಯಾಚನೆ ಕ್ರಮಾಂಕ 12-ಯುವಜನ ಸೇವೆ

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಯುವಜನ ಸೇವೆಗಳಿಗೆ'' ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 32,40.90.000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

15) ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು:-

ಅಭಿಯಾಚನೆ ಕ್ರಮಾಂಕ 4- ಮೀನುಗಾರಿಕೆ

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಮೀನುಗಾರಿಕೆಗೆ'' ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 19,38,17,000 ರೂ. ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 6,97,09,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

16) ಅಭಿಯಾಚನೆ ಕ್ರಮಾಂಕ 46- ರೇವು ಮತ್ತು ಜಲಸಾರಿಗೆ ಸೇವೆಗಳು

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1996 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ '' ರೇವು ಮತ್ತು ಜಲಸಾರಿಗೆ ಸೇವೆಗಳಿಗಾಗಿ'' ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 330,28,000 ರೂ. ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 6,72,00,000 ರೂ ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

1995-96ನೇ ಸಾಲಿನ ಬೇಡಿಕೆಗಳ ಮೇಲಿನ ಚರ್ಚೆ

ಶ್ರೀ ಡಾ॥ಯು. ಚಿತ್ತರಂಜನ್ (ಭಟ್ಕಳ):- ಸನ್ಮಾನ್ಯ ಅಧ್ಯಕ್ಷರೇ, ಈ ಬೇಡಿಕೆಗಳ ಬಗ್ಗೆ ಚರ್ಚೆಯನ್ನು ಆರಂಭಿಸಲಿಕ್ಕೆ ನನಗೆ ಅನುಮತಿ ಕೊಟ್ಟಿದ್ದಕ್ಕೆ ತಮಗೆ ಕೃತಜ್ಞತೆ ಅರ್ಪಿಸಿ ನನ್ನ ಮಾತನ್ನು ಮುಂದುವರಿಸಲಿಕ್ಕೆ ಇಚ್ಛಿಪಡುತ್ತೇನೆ. ಬಹುಶಃ ಈ ಶಾಸನಸಭೆಯ ಕಾರ್ಯಕಲಾಪಗಳಲ್ಲಿ ಅತ್ಯಂತ ಪ್ರಾಮುಖ್ಯವಾದ ಕಾರ್ಯ ಬೇಡಿಕೆಗಳನ್ನು ಮಂಡಿಸುವುದು ಹಾಗೂ ಅದರ ಬಗ್ಗೆ ಚರ್ಚೆಯಾಗುವುದು, ಆ ಚರ್ಚೆಯಲ್ಲಿ ರಚನಾತ್ಮಕವಾದ ವಿಚಾರವನ್ನು ಸರ್ಕಾರ, ಅದು ವಿರೋಧ ಪಕ್ಷದಿಂದಲೇ ಬರಲಿ ಆಳುವ ಪಕ್ಷದಿಂದಲೇ ಬರಲಿ ಅದರ ಬಗ್ಗೆ ಗಮನಹರಿಸಿ ಸರಿಯಾದ ಕ್ರಮ ತೆಗೆದುಕೊಳ್ಳುವುದು ತೀರ ಅವಶ್ಯಕವಿದೆ. ಶಾಸನಸಭೆಗೆ ಬಂದಂತಹ ಶಾಸಕರು ನಾವು ಮಾಡಬೇಕಾದ ಅತ್ಯಂತ ಪವಿತ್ರವಾದ ಹಾಗೂ ಮುಖ್ಯವಾದ ಕೆಲಸವೆಂದು ತಿಳಿದುಕೊಂಡು ನಾನು ಮಾತನಾಡಲು ಪ್ರಾರಂಭ ಮಾಡುತ್ತಿದ್ದೇನೆ. ಇದು ಏಕೆ ಪ್ರಾಮುಖ್ಯತೆಯನ್ನು ಹೊಂದಿದೆ ಎಂಬುದಕ್ಕೆ ಒಂದೆರಡು ನಿಮಿಷ ನಾನು ಹೇಳಲಿಕ್ಕೆ ಇಚ್ಛಿಪಡುತ್ತೇನೆ. ಹೀಗೆ ಬೇಡಿಕೆಗಳಿಗೆ ಇಡೀ ವರ್ಷದ ಕಾರ್ಯಕ್ರಮಗಳಿಗಾಗಿ ಬೇಕಾದ ಹಣವನ್ನು ಒದಗಿಸದೇ ಇದ್ದರೆ ಆ ಕಾರ್ಯಕ್ರಮಗಳನ್ನು ಮಾಡಲಿಕ್ಕೆ ಸಾಧ್ಯವಾಗುವುದಿಲ್ಲ. ಕೇವಲ ಹಣವಿಲ್ಲದ ಕಾರಣಕ್ಕೆ ಕಾರ್ಯಕ್ರಮ ನಿಂತುಹೋಗುವಂತಹ ಪರಿಸ್ಥಿತಿಯೂ ಉಂಟು. ಅಲ್ಲಿಂದಿಲ್ಲಿಂದ ಸೇರಿಸಿ ಮಾಡುವಂತಹ ವ್ಯವಸ್ಥೆ ಇರಬಹುದು, ಆದಾಗ್ಯೂ ಕೂಡ ಹಾಗೆ ಮಾಡುವುದಕ್ಕೆ ಆಗುವುದಿಲ್ಲ. ಈ ಬೇಡಿಕೆಗಳನ್ನು ಮಂಡಿಸುವಾಗ ಮಂತ್ರಿಗಳು ಬಜೆಟ್‌ನಲ್ಲಿ ಹೇಳಲಾಗಿರುವ ಅಂಕಿಸಂಖ್ಯೆಗಳೇನಿವೆ ಅದರ ಆಧಾರದ ಮೇಲೆ ಇಲ್ಲಿ ಮಂಡಿಸಲಾಗಿದೆ. ಆದರೆ ನನಗೊಂದು ಪ್ರಾಮಾಣಿಕವಾದ ಅನುಮಾನ. ಈ ಬಜೆಟ್ ತಯಾರುಮಾಡುವಂತಹ ಸಂದರ್ಭದಲ್ಲಿ ಸಂಬಂಧಪಟ್ಟ ಮಂತ್ರಿಗಳು,